# ಕರ್ನಾಟಕ ಸರ್ಕಾರ

**ವಿಷಯ:** ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ ಮತ್ತು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಯೋಜನೆಗಳ ಫಲಾನುಭವಿಗಳ ಆಯ್ಕೆ, ಅನುಷ್ಠಾನದಲ್ಲಿ ಅನುಸರಿಸಬೇಕಾದ ಮಾರ್ಗಸೂಚಿಗಳು.

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ:ಸಕಇ/221/ಬಿಸಿಎ/2008, ದಿನಾಂಕ: 2-1-2009 ಮತ್ತು ದಿನಾಂಕ:09-11-2009 ಸರ್ಕಾರ ತಿದ್ದುಪಡಿ ಆದೇಶದ ಸಂಖ್ಯೆ:ಸಕಇ/253/ ಬಿಸಿಎ/2009.

-- 0 --

**ಪ್ರಸ್ತಾವನೆ:**

ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರುವ ಡಾ|| ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಇವರುಗಳು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಆಯ್ಕೆ ಸಮಿತಿಯನ್ನು ಉಲ್ಲೇಖ (1)ರ ಸರ್ಕಾರಿ ಆದೇಶಗಳಲ್ಲಿ ರಚಿಸಲಾಗಿರುತ್ತದೆ.

ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ಮತ್ತು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳ ವ್ಯವಸ್ಥಾಪಕ ನಿರ್ದೇಶಕರುಗಳು ಪ್ರಸ್ತಾವನೆಯನ್ನು ಸಲ್ಲಿಸಿ ಆಯ್ಕೆ ಸಮಿತಿಯು ಫಲಾನುಭವಿಗಳ ಆಯ್ಕೆ ಬಗ್ಗೆ ಮಾರ್ಗಸೂಚಿಗಳು ಮತ್ತು ಮಾನದಂಡಗಳ ಬಗ್ಗೆ ಉಲ್ಲೇಖ(1)ರ ಸರ್ಕಾರಿ ಆದೇಶಗಳಲ್ಲಿ ವಿವರಗಳು ಇಲ್ಲದೆ ಇರುವುದರಿಂದ, ಜಿಲ್ಲೆಗಳಲ್ಲಿ ಆಯ್ಕೆ ಸಮಿತಿಯು ಫಲಾನುಭವಿಗಳನ್ನು ಆಯ್ಕೆ ಮಾಡುವ ಬಗ್ಗೆ ಅನುಕೂಲವಾಗುವಂತೆ ಏಕ ರೂಪದ ಮಾರ್ಗಸೂಚಿಗಳನ್ನು ಹೊರಡಿಸಲು ಸರ್ಕಾರವನ್ನು ಕೋರಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಉಲ್ಲೇಖ(1)ರ ಸರ್ಕಾರಿ ಆದೇಶದಲ್ಲಿ ರಚಿಸಲಾಗಿರುವ ಆಯ್ಕೆ ಸಮಿತಿಗಳು ಫಲಾನುಭವಿಗಳನ್ನು ಆಯ್ಕೆ ಮಾಡಲು ಅನುಸರಿಸಬೇಕಾದ ಮಾರ್ಗಸೂಚಿಗಳನ್ನು ಹೊರಡಿಸುವ ಅಗತ್ಯವಿದೆ ಎಂದು ಪರಿಗಣಿಸಿ ಈ ಕೆಳಕಂಡ ಆದೇಶ ನೀಡಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ:ಸಕಇ/36/ಬಿಸಿಎ/2012**

**ಬೆಂಗಳೂರು, ದಿನಾಂಕ: 12.04.2012**

ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ಮತ್ತು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳ ವ್ಯವಸ್ಥಾಪಕ ನಿರ್ದೇಶಕರುಗಳು ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ವಿವಿಧ ಯೋಜನೆಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಆಯ್ಕೆ ಸಮಿತಿಯು ಅನುಸರಿಸಬೇಕಾದ

ಮಾರ್ಗಸೂಚಿಗಳನ್ನು ಈ ಆದೇಶದ ಅನುಬಂಧ-ಅ ನಲ್ಲಿ ನೀಡಲಾಗಿದೆ. ಸದರಿ ಮಾರ್ಗಸೂಚಿಗಳಂತೆ ಫಲಾನುಭವಿಗಳ ಆಯ್ಕೆ ಮತ್ತು ಇತರೆ ಕ್ರಮಗಳನ್ನು ತೆಗೆದುಕೊಳ್ಳಲು ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ,
ಮತ್ತು ಅವರ ಹೆಸರಿನಲ್ಲಿ,

(ಎಂ. ಎಂ. ಭಾಟೆ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಗೆ,
ಸಂಕಲನಕಾರರು,
ರಾಜ್ಯಪತ್ರ ಪ್ರಕಟಣೆಗಾಗಿ.

ಪ್ರತಿಗಳು:-

1. ಮಹಾಲೇಖಪಾಲಕರು, ಕರ್ನಾಟಕ ಸರ್ಕಾರ, ಬೆಂಗಳೂರು.
2. ಅಧ್ಯಕ್ಷರು ಆಯ್ಕೆ ಸಮಿತಿ ಎಲ್ಲಾ ವಿಧಾಸಭಾ ಕ್ಷೇತ್ರಗಳು.
3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ
5. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಬೆಂಗಳೂರು.
9. ಎಲ್ಲಾ ಜಿಲ್ಲಾಧಿಕಾರಿಗಳು.
10. ಎಲ್ಲಾ ಜಿಲ್ಲಾ ಪಂಚಾಯತ್, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
11. ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಸಮಾಜ ಕಲ್ಯಾಣ / ಪರಿಶಿಷ್ಟ ವರ್ಗಗಳ / ಹಿಂದುಳಿದ ವರ್ಗಗಳ ಅಧಿಕಾರಿಗಳು.
12. ಎಲ್ಲಾ ತಾಲ್ಲೂಕ್ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು.
13. ಆರ್ಥಿಕ ಇಲಾಖೆ ವೆಚ್ಚ-3.
14. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು.
15. ಶಾಖಾ ರಕ್ಷಾ ಕಡತ.
16. ಹೆಚ್ಚುವರಿ ಪ್ರತಿ.

..............

# ಕರ್ನಾಟಕ ಸರ್ಕಾರ

**ವಿಷಯ:** ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ ಮತ್ತು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಯೋಜನೆಗಳ ಫಲಾನುಭವಿಗಳ ಆಯ್ಕೆ, ಅನುಷ್ಠಾನದಲ್ಲಿ ಅನುಸರಿಸಬೇಕಾದ ಮಾರ್ಗಸೂಚಿಗಳು.

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ:ಸಕಇ/221/ಬಿಸಿಎ/2008, ದಿನಾಂಕ: 2-1-2009 ಮತ್ತು ದಿನಾಂಕ:09-11-2009' ಸರ್ಕಾರ ತಿದ್ದುಪಡಿ ಆದೇಶದ ಸಂಖ್ಯೆ:ಸಕಇ/253/ ಬಿಸಿಎ/2009.

-- 0 --

**ಪ್ರಸ್ತಾವನೆ:**

ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರುವ ಡಾ|| ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಇವರುಗಳು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಆಯ್ಕೆ ಸಮಿತಿಯನ್ನು ಉಲ್ಲೇಖ (1)ರ ಸರ್ಕಾರಿ ಆದೇಶಗಳಲ್ಲಿ ರಚಿಸಲಾಗಿರುತ್ತದೆ.

ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃರ್ದಥಿ ನಿಗಮ ಮತ್ತು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳ ವ್ಯವಸ್ಥಾಪಕ ನಿರ್ದೇಶಕರುಗಳು ಪ್ರಸ್ತಾವನೆಯನ್ನು ಸಲ್ಲಿಸಿ ಆಯ್ಕೆ ಸಮಿತಿಯು ಫಲಾನುಭವಿಗಳ ಆಯ್ಕೆ ಬಗ್ಗೆ ಮಾರ್ಗಸೂಚಿಗಳು ಮತ್ತು ಮಾನದಂಡಗಳ ಬಗ್ಗೆ ಉಲ್ಲೇಖ(1)ರ ಸರ್ಕಾರಿ ಆದೇಶಗಳಲ್ಲಿ ವಿವರಗಳು ಇಲ್ಲದೆ ಇರುವುದರಿಂದ, ಜಿಲ್ಲೆಗಳಲ್ಲಿ ಆಯ್ಕೆ ಸಮಿತಿಯು ಫಲಾನುಭವಿಗಳನ್ನು ಆಯ್ಕೆ ಮಾಡುವ ಬಗ್ಗೆ ಅನುಕೂಲವಾಗುವಂತೆ ಏಕ ರೂಪದ ಮಾರ್ಗಸೂಚಿಗಳನ್ನು ಹೊರಡಿಸಲು ಸರ್ಕಾರವನ್ನು ಕೋರಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಉಲ್ಲೇಖ(1)ರ ಸರ್ಕಾರಿ ಆದೇಶದಲ್ಲಿ ರಚಿಸಲಾಗಿರುವ ಆಯ್ಕೆ ಸಮಿತಿಗಳು ಫಲಾನುಭವಿಗಳನ್ನು ಆಯ್ಕೆ ಮಾಡಲು ಅನುಸರಿಸಬೇಕಾದ ಮಾರ್ಗಸೂಚಿಗಳನ್ನು ಹೊರಡಿಸುವ ಅಗತ್ಯವಿದೆ ಎಂದು ಪರಿಗಣಿಸಿ ಈ ಕೆಳಕಂಡ ಆದೇಶ ನೀಡಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ:ಸಕಇ/36/ಬಿಸಿಎ/2012**

**ಬೆಂಗಳೂರು, ದಿನಾಂಕ: 12.04.2012**

ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃರ್ದಥಿ ನಿಗಮ ಮತ್ತು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳ ವ್ಯವಸ್ಥಾಪಕ ನಿರ್ದೇಶಕರುಗಳು ಸಲ್ಲಿಸಿರುವ ಪ್ರಸ್ತಾವನೆಯ ಪರಿಶೀಲಿಸಿ ಸರ್ಕಾರವು ವಿವಿಧ ಯೋಜನೆಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಆಯ್ಕೆ ಸಮಿತಿಯು ಅನುಸರಿಸಬೇಕಾದ

ಮಾರ್ಗಸೂಚಿಗಳನ್ನು ಈ ಆದೇಶದ ಅನುಬಂಧ-ಅ ನಲ್ಲಿ ನೀಡಲಾಗಿದೆ. ಸದರಿ ಮಾರ್ಗಸೂಚಿಗಳಂತೆ ಫಲಾನುಭವಿಗಳ ಆಯ್ಕೆ ಮತ್ತು ಇತರೆ ಕ್ರಮಗಳನ್ನು ತೆಗೆದುಕೊಳ್ಳಲು ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ,
ಮತ್ತು ಅವರ ಹೆಸರಿನಲ್ಲಿ,

(ಎಂ. ಎಂ. ಭಾಟೆ) 12-4
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಗೆ,
ಸಂಕಲನಕಾರರು,
ರಾಜ್ಯಪತ್ರ ಪ್ರಕಟಣೆಗಾಗಿ.

ಪ್ರತಿಗಳು:-

1. ಮಹಾಲೇಖಪಾಲಕರು, ಕರ್ನಾಟಕ ಸರ್ಕಾರ, ಬೆಂಗಳೂರು.
2. ಅಧ್ಯಕ್ಷರು ಆಯ್ಕೆ ಸಮಿತಿ ಎಲ್ಲಾ ವಿಧಾಸಭಾ ಕ್ಷೇತ್ರಗಳು.
3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ.
5. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಬೆಂಗಳೂರು.
9. ಎಲ್ಲಾ ಜಿಲ್ಲಾಧಿಕಾರಿಗಳು.
10. ಎಲ್ಲಾ ಜಿಲ್ಲಾ ಪಂಚಾಯತ್, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
11. ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಸಮಾಜ ಕಲ್ಯಾಣ / ಪರಿಶಿಷ್ಟ ವರ್ಗಗಳ / ಹಿಂದುಳಿದ ವರ್ಗಗಳ ಅಧಿಕಾರಿಗಳು.
12. ಎಲ್ಲಾ ತಾಲ್ಲೂಕ್ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು.
13. ಆರ್ಥಿಕ ಇಲಾಖೆ ವೆಚ್ಚ-3.
14. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು.
15. ಶಾಖಾ ರಕ್ಷಾ ಕಡತ.
16. ಹೆಚ್ಚುವರಿ ಪ್ರತಿ.